ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಆಶ್ರಯ ಶಾಲೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

538(653) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಆಶ್ರಯ ಶಾಲೆಗಳ ಕಟ್ಟಡ ಮೂಲಭೂತ ಸೌಕರ್ಯಗಳು ಮತ್ತು ಶೈಕ್ಷಣಿಕ ನಿರ್ವಹಣೆಗಾಗಿ ಕಳೆದ 3 ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ಮತ್ತು 116 ಆಶ್ರಮ ಶಾಲೆವಾರು, ವಾರ್ಷಿಕವಾರು ಸಂಪೂರ್ಣ ವಿವರ ನೀಡುವುದು)

(ಆ) ಆಶ್ರಮ ಶಾಲೆಗಳ ಶೈಕ್ಷಣಿಕ ನಿರ್ವಹಣೆಯನ್ನು ಶಿಕ್ಷಣ ಇಲಾಖೆಗೆ ವರ್ಗಾಹಿಸುವ ಸಂಬಂಧ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಇ) ಆಶ್ರಮ ಶಾಲೆಗಳ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳ ಸಮರ್ಪಕ ನಿರ್ವಹಣೆಯಿಲ್ಲದೆ ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)